1583ನೇ ಚುಕ್ಕೆ (94)
4ಕಕ
3103

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ ಶ್ರೀನಿವಾಸ್ ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ**:- ಬೆಂಗಳೂರಿನ ಮಹಾರಾಣಿ ವಿಶ್ವವಿದ್ಯಾಲಯ ಮತ್ತು ನೃಪತುಂಗ ವಿಶ್ವವಿದ್ಯಾಲಯಗಳಿಗೆ ಕಳೆದ ಒಂದೂವರೆ ವರ್ಷಗಳಿಂದ ಕುಲಪತಿಗಳ ನೇಮಕಾತಿ ಪ್ರಕ್ರಿಯೆ ಆರಂಭವಾಗದೆ ಇರುವುದು ಸದರಿ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಅಭಿವೃದ್ಧಿಗೆ ಪ್ರತಿಕೂಲ ಪರಿಣಾಮ ಬೀರುತ್ತಿದ್ದು ಈ ವಿಶ್ವವಿದ್ಯಾಲಯಗಳಿಗೆ ಕುಲಪತಿಗಳ ನೇಮಕ ಮಾಡಬೇಕು ಅಥವಾ ಈ ವಿಶ್ವವಿದ್ಯಾಲಯಗಳನ್ನು ಮತ್ತೆ ಕಾಲೇಜುಗಳಾಗಿ ಪರಿವರ್ತಿಸಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದಂತಹ ವಾತಾವರಣ ನಿರ್ಮಾಣ ಮಾಡಬೇಕೆಂಬ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ:** ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದಿಂದ ಬೇರ್ಪಡಿಸುವ ಮೂಲಕ ಬೆಂಗಳೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಮತ್ತು ಶ್ರೀಮತಿ ವಿ.ಎಚ್.ಡಿ ಕೇಂದ್ರೀಯ ಮಹಿಳಾ ಗೃಹ ವಿಜ್ಞಾನ ಕಾಲೇಜುಗಳನ್ನು ಸಂಯೋಜಿಸಿ ಏಕಾತ್ಮಕ ಸ್ವರೂಪದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವನ್ನು 2019 ರಲ್ಲಿ ಸ್ಥಾಪಿಸಲಾಗಿರುತ್ತದೆ. ಮುಂದುವರೆದು, ಬೆಂಗಳೂರಿನ ಸರ್ಕಾರಿ ವಿಜ್ಞಾನ (ಸ್ವಾಯತ್ತ) ಕಾಲೇಜನ್ನು ಮೇಲ್ದರ್ಜೆಗೇರಿಸಿ ನೃಪತುಂಗ ಏಕೀಕೃತ ವಿಶ್ವವಿದ್ಯಾಲಯವನ್ನಾಗಿ 2020 ರಲ್ಲಿ ಸ್ಥಾಪನೆ ಮಾಡಲಾಗಿದೆ. ಸದರಿ 02 ವಿಶ್ವವಿದ್ಯಾಲಯಗಳನ್ನು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ ರೂಸಾ ಕಾರ್ಯಕ್ರಮದ ಅನುದಾನದಡಿಯಲ್ಲಿ ಸ್ಥಾಪಿಸಲಾಗಿರುತ್ತದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಪ್ರಕರಣ 14 ರಡಿ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ ಮತ್ತು ನೃಪತುಂಗ ವಿಶ್ವವಿದ್ಯಾನಿಲಯಗಳಿಗೆ ಕುಲಪತಿಗಳನ್ನು ಪೂರ್ಣ ಪ್ರಮಾಣದ ಅವಧಿಗೆ ನೇಮಕಾತಿ ಮಾಡದಿರುವುದರಿಂದ ವಿಶ್ವವಿದ್ಯಾನಿಲಯದ ಆಡಳಿತ/ಶೈಕ್ಷಣಿಕ ಅಭಿವೃದ್ಧಿಗೆ ಯಾವುದೇ ರೀತಿಯ ಪ್ರತಿಕೂಲವಾಗಿರುವುದಿಲ್ಲ. ವಿಶ್ವವಿದ್ಯಾಲಯದ ಅಧಿನಿಯಮ 2000 ರ ಪ್ರಕರಣ 16(2) ರಲ್ಲಿ ಕುಲಪತಿ ಹುದ್ದೆಯು ಭರ್ತಿಯಾಗದೇ ಖಾಲಿ ಉಳಿದಿರುವ ಅವಧಿಯಲ್ಲಿ ಕುಲಾಧಿಪತಿಯು ನೇಮಕಮಾಡಬಹುದಾದ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಅಂಥ ಜೇಷ್ಠತಮ ಡೀನನು ಕುಲಪತಿಯಾಗಿ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸಿದ್ದು, ಅದರಂತೆ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಕುಲಪತಿಗಳ ಹುದ್ದೆಗೆ ನೇಮಕ ಮಾಡಲಾಗಿರುವುದರಿಂದ ವಿಶ್ವವಿದ್ಯಾಲಯಗಳ ಆಡಳಿತಕ್ಕೆ ಯಾವುದೇ ಅನಾನುಕೂಲವಾಗಿರುವುದಿಲ್ಲ. ಮುಂದುವರೆದು, ಪ್ರಸ್ತುತದಲ್ಲಿ ಪ್ರಭಾರ ಕುಲಪತಿಗಳ ಅಧ್ಯಕ್ಷತೆಯಲ್ಲಿ ಹಾಗೂ ಸಿಂಡಿಕೇಟ್, ವಿದ್ಯಾವಿಷಯಕ ಪರಿಷತ್ ಮತ್ತು ಹಣಕಾಸು ಸಮಿತಿಯ ನಿರ್ಣಯಗಳಂತೆ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ.

ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾನಿಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು

..2

ರಚಿಸಲಾಗಿದೆ. ಸದರಿ ಸಮಿತಿಯು ದಿ:13.02.2025 ಮತ್ತು ದಿ:09.05.2025 ರಂದು ಸಭೆಗಳನ್ನು ನಡೆಸಿದ್ದು, ಪ್ರಸ್ತುತ ಇಲ್ಲಿಯವರೆಗೆ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸದರಿ ಸಮಿತಿಯು ನೀಡುವ ಶಿಫಾರಸ್ಸುಗಳನ್ನು ಪರಿಶೀಲಿಸಿ, ನಂತರ ಸಚಿವ ಸಂಪುಟದ ಮುಂದೆ ಮಂಡಿಸಿ ವಿಶ್ವವಿದ್ಯಾನಿಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಢಗೊಳ್ಳಲು ಅಗತ್ಯಕ್ರಮವನ್ನು ಕೈಗೊಳ್ಳಲಾಗುತ್ತದೆ.

ಈ ವಿಶ್ವವಿದ್ಯಾನಿಲಯಗಳನ್ನು ಮತ್ತೆ ಕಾಲೇಜುಗಳಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

**ಸಂಖ್ಯೆ:ಇಡಿ/109/ಯುಆರ್ ಸಿ/2026**

**(ಡಾ॥ ಎಂ.ಸಿ ಸುಧಾಕರ್)**
ಉನ್ನತ ಶಿಕ್ಷಣ ಸಚಿವರು.